ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆ

858 (1420) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮೀಣ ಭಾಗದಲ್ಲಿ ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸುವಾಗ ಸರ್ಕಾರ ಅನುಸರಿಸುವ ನೀತಿ ನಿಯಮಗಳೇನು;

ಆ) ಇದರ ಅನ್ವಯ ಕಳೆದ 3 ವರ್ಷಗಳ ಅವಧಿಯಲ್ಲಿ ಬೀದರ್ ಜಿಲ್ಲೆಯಿಂದ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಂಜೂರಾತಿಗಾಗಿ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆ;

ಇ) ಈ ಪೈಕಿ ಎಷ್ಟು ಕೇಂದ್ರಗಳಿಗೆ ಮಂಜೂರಾತಿ ದೊರೆತಿದೆ; ಎಷ್ಟು ಕೇಂದ್ರಗಳು ಪ್ರಾರಂಭವಾಗಿವೆ; ಈ ಪೈಕಿ ಭಾಲ್ಕಿ ಮತ ಕ್ಷೇತ್ರದ ಯಾವ ಗ್ರಾಮಗಳಲ್ಲಿ ಈ ಕೇಂದ್ರ ತೆರೆಯಲಾಗಿದೆ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಮಾರ್ಗಸೂಚಿಗಳ ಅನ್ವಯ, ಬಯಲು ಪ್ರದೇಶದಲ್ಲಿ 30,000 ಜನಸಂಖ್ಯೆಗೆ ಹಾಗೂ ಗುಡ್ಡಗಾಡು ಮತ್ತು ಬುಡಕಟ್ಟು ಪ್ರದೇಶದಲ್ಲಿ 20,000 ಜನಸಂಖ್ಯೆಗೆ ಒಂದರಂತೆ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲು ಅವಕಾಶವಿದೆ.

ಆ) ಕಳೆದ 3 ವರ್ಷಗಳ ಅವಧಿಯಲ್ಲಿ ಬೀದರ್ ಜಿಲ್ಲೆಯಿಂದ 23 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಂಜೂರಾತಿಗಾಗಿ ಪ್ರಸ್ತಾವನೆ ಬಂದಿದೆ.

ಇ) ಬೀದರ್ ಜಿಲ್ಲೆಯ ಬಸವ ಕಲ್ಯಾಣ ತಾಲ್ಲೂಕಿನ ಕಲ್ಯೋರ ಮತ್ತು ಹುಮ್ನಾಬಾದ್ ತಾಲ್ಲೂಕಿನ ಕೋಡಂಬಳ್ ಗ್ರಾಮಗಳಲ್ಲಿ ಒಂದೊಂದು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಲಾಗಿದ್ದು, ವಿಧಿಸಿದ್ದ ಷರತ್ತುಗಳನ್ನು ಪೂರೈಸಿರುವ ಕಾರಣ ಅವುಗಳನ್ನು ಪ್ರಾರಂಭಿಸಲು ಸರ್ಕಾರ ಈಗಾಗಲೇ ಅನುಮತಿ ನೀಡಿದೆ.

ಭಾಲ್ಕಿ ಮತ ಕ್ಷೇತ್ರದ ಯಾವ ಗ್ರಾಮದಲ್ಲಿಯೂ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಪ್ರಾರಂಭಿಸಲು ಅನುಮತಿ ನೀಡಿರುವುದಿಲ್ಲ.